# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸರ್ವಜ್ಞನಗರ ವಿಧಾನ ಸಭಾಕ್ಷೇತ್ರದ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ.30 ಕಾಡುಗೊಂಡನಹಳ್ಳಿಗೆ ಸಂಬಂಧಿಸಿದಂತೆ ದಿನಾಂಕ: 02-07-2022 ರಂದು ಶ್ರೀ.ವೆಂಕಟ ದುರ್ಗಾ ಪ್ರಸಾದ್ ಕುಂಚಾಲ ನೋಡಲ್ ಅಧಿಕಾರಿಗಳು ಇವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಮತ್ತು ವಿಪತ್ತು ನಿರ್ವಹಣಾ ಸಮಿತಿ ಸಭೆಯ ನಡಾವಳಿಗಳು.

*ಸಭೆಯಲ್ಲಿ ಹಾಜರಿದ್ದವರ ವಿವರ:-*

| ಕ್ರಮ ಸಂಖ್ಯೆ | ಅಧಿಕಾರಿಗಳ ಹೆಸರು | ಪದನಾಮ |
|---|---|---|
| 1 | ಶ್ರೀ.ವೆಂಕಟ ದುರ್ಗಾ ಪ್ರಸಾದ್ ಕುಂಚಾಲ. | ಜಂಟಿ ನಿರ್ದೇಶಕರು (ನಗರಯೋಜನೆ-ಸ್ಕ್ವಾಡ್) ಹಾಗೂ ನೋಡಲ್ಅಧಿಕಾರಿ& ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಂಖ್ಯೆ-30 ಕೆ.ಜಿ.ಹಳ್ಳಿ |
| 2 | ಶ್ರೀ.ಹರ್ಷಿತ್ ಕುಮಾರ್ | ಸಹಾಯಕ ಅಭಿಯಂತರರು, & ಸದಸ್ಯ ಕಾರ್ಯದರ್ಶಿಗಳು ವಾರ್ಡ್ ಸಮಿತಿ ವಾರ್ಡ್ ಸಂಖ್ಯೆ.30. ಕೆ.ಜಿ.ಹಳ್ಳಿ. |
| 3 | ಡಾ॥ಪುಷ್ಪ.ಎಂ | ವೈದ್ಯಾಧಿಕಾರಿಗಳು, ಕೆ.ಜಿ.ಹಳ್ಳಿ PHC |
| 4 | ಡಾ॥ದೀಪ್ತಿ | ವೈದ್ಯಾಧಿಕಾರಿಗಳು, ಕೆ.ಜಿ.ಹಳ್ಳಿ PHC |
| 5 | ಶ್ರೀ.ಮಂಜುನಾಥ್ | ಕೆಲಸ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 6 | ಶ್ರೀ.ಜಗದೀಶ್.ಬಿ.ಕೆ | ಸಂಚಾರಿ ಪೊಲೀಸ್ ಠಾಣೆ, ಕೆ.ಜಿ.ಹಳ್ಳಿ |
| 7 | ಶ್ರೀ.ಮೊಹಮ್ಮದ್ ಮಜಹುದ್ದೀನ್ | ಹೆಚ್.ಆರ್.ಪಿ.ಜಿ |
| 8 | ಶ್ರೀ.ಶಿವಕುಮಾರ್ | ಮಾರ್ಷಲ್ |
| 9 | ಶ್ರೀ.ಪಿ.ಚಂದ್ರಶೇಖರ್.ಜಿ.ಎಸ್ | ಹೆಚ್.ಆರ್.ಪಿ.ಜಿ |
| 10 | ಶ್ರೀ.ಯಾಕೂಬ್ ಖಾನ್ | ಸ್ಥಳೀಯರು |
| 11 | ಶ್ರೀ.ಜಾನ್ ಫ್ರಾನ್ಸಿಸ್ | ಸ್ಥಳೀಯರು |
| 12 | ಶ್ರೀ.ಸೈಯದ್ ಜಮೀಲ್ | ಸ್ಥಳೀಯರು |
| 13 | ಶ್ರೀ.ಎಷಾನ್ | ಸ್ಥಳೀಯರು |
| 14 | ಶ್ರೀ.ಕೆ.ರಮೇಶ್ | ಸ್ಥಳೀಯರು |
| 15 | ಶ್ರೀ.ಜೆ.ಮಹೇಂದ್ರನ್ | ಸ್ಥಳೀಯರು |
| 16 | ಶ್ರೀ.ರಾಜರಾಮ್ | ಸ್ಥಳೀಯರು |

ವಾರ್ಡ್ ಸಮಿತಿಯ ನೋಡಲ್ ಅಧಿಕಾರಿ ರವರು ಮತ್ತು ಸದಸ್ಯ ಕಾರ್ಯದರ್ಶಿ ರವರು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳನ್ನು ಹಾಗೂ ಸಾರ್ವಜನಿಕರನ್ನು ಸ್ವಾಗತಿಸುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

1) <u>ಘನತ್ಯಾಜ್ಯ ನಿರ್ವಹಣೆ</u>:-ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯ 9ನೇ ಮುಖ್ಯರಸ್ತೆ ವಿನೋಭನಗರ ಪ್ರದೇಶದಲ್ಲಿರುವ ಪೀಠೋಪಕರಣಗಳ ಮಳಿಗೆಯವರು ಮರಗಳ ಕಸವನ್ನು ರಸ್ತೆಯಲ್ಲಿ ಎಸೆಯುತ್ತಿದ್ದಾರೆಂದು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿನ ಪಾರ್ಕ್‌ಗಳಲ್ಲಿ ಸೊಳ್ಳೆಗಳ ಹಾವಳಿ ಹೆಚ್ಚಾಗಿದ್ದು, ಅದನ್ನು ನಿಯಂತ್ರಿಸಲು ಫಾಗಿಂಗ್ ಅನ್ನು ಸಿಂಪಡಿಸುವಂತೆ ಶ್ರೀ.ಚಂದ್ರಶೇಖರ್ ರವರು ತಿಳಿಸಿರುತ್ತಾರೆ.

ಸದರಿ ವಿಷಯದ ಬಗ್ಗೆ ಕ್ರಮ ಕೈಗೊಳ್ಳುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿದರು.

<u>(ಕ್ರಮ :-ಸ.ಕಾ.ಅ ಘನತ್ಯಾಜ್ಯ ನಿರ್ವಹಣೆ ಸರ್ವಜ್ಞನಗರ ವಿಭಾಗ ಬೆಂಗಳೂರು)</u>

2) <u>ಬೀದಿ ದೀಪಗಳ ನಿರ್ವಹಣೆ ಬಗ್ಗೆ</u>:-ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿನ, 10ನೇ ಅಡ್ಡರಸ್ತೆ ವಿನೋಭನಗರ ರಸ್ತೆಯಲ್ಲಿ ಬೀದಿ ದೀಪಗಳನ್ನು ದುರಸ್ಥಿಪಡಿಸಲು ಶ್ರೀ.ಸತ್ಯನಾರಾಯಣ ರವರು ಸಭೆಯಲ್ಲಿ ತಿಳಿಸಿರುತ್ತಾರೆ.

<u>(ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ವಿಭಾಗ ಬಿ.ಬಿ.ಎಂ.ಪಿ)</u>

3) <u>ನೀರು ಸರಭರಾಜು ಮತ್ತು ಒಳಚರಂಡಿ ವ್ಯವಸ್ಥೆ ಬಗ್ಗೆ (ಬಿ.ಡಬ್ಲ್ಯೂ.ಎಸ್.ಎಸ್.ಬಿ)</u>:- ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯ 5ನೇ, 6ನೇ ಮುಖ್ಯರಸ್ತೆ ಮತ್ತು 2ನೇ ಅಡ್ಡರಸ್ತೆ, ಪಿಳ್ಳಣ್ಣಗಾರ್ಡನ್‌ನಲ್ಲಿ ದಿನನಿತ್ಯ ಕುಡಿಯುವ ನೀರಿನ ಸರಬರಾಜು ಆಗದೇ ಇದ್ದರೂ ನೀರಿನ ಬಿಲ್ ಹೆಚ್ಚಾಗಿ ಬರುತ್ತಿರುತ್ತದೆ ಎಂದು ಶ್ರೀ.ಮೊಹಮ್ಮದ್ ಮುಜ್ರುದ್ದೀನ್, ಹೆಚ್.ಆರ್.ಪಿ.ಜಿ ರವರು ತಿಳಿಸಿರುತ್ತಾರೆ ಹಾಗೂ ಕುಡಿಯುವ ನೀರಿನ ಸರಬರಾಜು ಸಮರ್ಪಕವಾಗಿ ಆಗುತ್ತಿಲ್ಲವೆಂದು ಶ್ರೀ.ರಮೇಶ್ ರವರು ತಿಳಿಸಿರುತ್ತಾರೆ.

ಈ ಬಗ್ಗೆ ಸ್ಥಳ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಶ್ರೀ.ಮಂಜುನಾಥ್, ಕೆಲಸ ಪರಿವೀಕ್ಷಕರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ವಾರ್ಡ್‌ನ ನೊಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

<u>(ಕ್ರಮ :- ಸ.ಕಾ.ಅ.ಬಿ.ಡಬ್ಲ್ಯು.ಎಸ್.ಎಸ್.ಬಿ ಉಪ-ವಿಭಾಗ, ಫ್ರೆಜರ್‌ಟೌನ್)</u>

4) <u>ಆರೋಗ್ಯ ವೈದ್ಯಾಧಿಕಾರಿಗಳು</u>:- ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿ 12 ರಿಂದ 14 ವರ್ಷದ ಒಳಗಿರುವ ಎಲ್ಲಾ ಮಕ್ಕಳಿಗೆ ಕೋವಿಡ್-19, ಕಾರ್ಬಿ-ವಾಕ್ಸ್ ಲಸಿಕೆಯನ್ನು ಹಾಗೂ 15-17 ವರ್ಷದ ಒಳಗಿರುವ ಎಲ್ಲಾ ಮಕ್ಕಳಿಗೆ ಕೋ-ವ್ಯಾಕ್ಸೀನ್ ಲಸಿಕೆಯನ್ನು ನೀಡುತ್ತಿರುವುದಾಗಿ ಡಾ॥ಪುಷ್ಪ ರವರು ಸಭೆಯಲ್ಲಿ ತಿಳಿಸಿರುತ್ತಾರೆ ಹಾಗೂ ಸರ್ಕಾರಿ ಉರ್ದು ಶಾಲೆಯಲ್ಲಿ ಮಕ್ಕಳಿಗೆ ಲಸಿಕೆಯನ್ನು ನೀಡಲು ಪೋಷಕರು ಹಿಂಜರಿಯುತ್ತಿದ್ದಾರೆಂದು ಡಾ॥ ದೀಪ್ತಿ ರವರು ತಿಳಿಸಿರುತ್ತಾರೆ.

ಸದರಿ ವಿಷಯದ ಬಗ್ಗೆ ಸಭೆಯಲ್ಲಿ ಹಾಜರಿದ್ದ ಶ್ರೀ.ಸೈಯದ್ ಜಮೀಲ್ ರವರಿಗೆ ಶಾಲೆಯ ಪ್ರಾಂಶುಪಾಲರ ಮೂಲಕ ಪೋಷಕರನ್ನು ಸಂಪರ್ಕಿಸಿ ಎಲ್ಲಾ ಮಕ್ಕಳಿಗೆ ಲಸಿಕೆಯನ್ನು ಹಾಕಿಸಲು ಸಹಕರಿಸುವಂತೆ ವಾರ್ಡ್‌ನ ನೋಡಲ್ ಅಧಿಕಾರಿರವರು ಕೋರಿರುತ್ತಾರೆ ಹಾಗೂ ಡೇಂಗ್ಯೂ ಹರಡುತ್ತಿರುವುದರಿಂದ ತಡೆಗಟ್ಟಲು ಫಾಂಗಿಂಗ್ ಸಿಂಪಡಿಸಲು ವೈಧ್ಯಾಧಿಕಾರಿಗಳಿಗೆ ವಾರ್ಡ್‌ನ ನೋಡಲ್ ಅಧಿಕಾರಿರವರು ಸೂಚಿಸಿರುತ್ತಾರೆ.

<u>(ಕ್ರಮ:- ಆರೋಗ್ಯ ವೈದ್ಯಾಧಿಕಾರಿಗಳು ಸರ್ವಜ್ಞನಗರ ವಿಭಾಗ ಬಿ.ಬಿ.ಎಂ.ಪಿ)</u>

5) <u>ಕಾಮಗಾರಿ ಇಲಾಖೆ</u>:- ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿನ ಪಿಳ್ಳಣ್ಣಗಾರ್ಡನ್‌ನಲ್ಲಿ ವಾಹನಗಳ ದಟ್ಟಣೆ ಹೆಚ್ಚಾಗಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಕೂಡು ರಸ್ತೆಗಳಲ್ಲಿ ಜೀಬ್ರಾ ಕ್ರಾಸಿಂಗ್ ಪೇಯಿಂಟ್ ಅನ್ನು ಮಾಡಲು ಶ್ರೀ.ಚಂದ್ರಶೇಖರ್ ರವರು ತಿಳಿಸಿರುತ್ತಾರೆ ಹಾಗೂ ವಿನೋಭನಗರ ಬಿ.ಎಂ.ಲೇಔಟ್‌ನಲ್ಲಿನ ಕೊಳವೆ ಬಾವಿಗಳಿಂದ ಪೈಪ್‌ಲೈನ್ ಸಂಪರ್ಕವನ್ನು ಕಲ್ಪಿಸಿ ನೀರು ಸರಬರಾಜು ಮಾಡಲು ಶ್ರೀ.ಇರ್ಫಾನ್ ರವರು ಸಭೆಯಲ್ಲಿ ತಿಳಿಸಿರುತ್ತಾರೆ ಹಾಗೂ ವಿನೋಭನಗರ ಕ್ವಾಟ್ರರ್ಸ್‌ನಲ್ಲಿ ಅಳವಡಿಸಲಾಗಿರುವ ಸಿ.ಸಿ.ಟಿ.ವಿ.ಗಳು ಹಾಗೂ ಇನ್ನಿತರೆ ಕಡೆಗಳಲ್ಲಿ ಸಿ.ಸಿ.ಟಿ.ವಿ.ಗಳು ಕಾರ್ಯನಿರ್ವಹಿಸುತ್ತಿಲ್ಲವೆಂದು ಶ್ರೀ.ಮಹೇಂದ್ರನ್ ರವರು ತಿಳಿಸಿರುತ್ತಾರೆ.

ಸದರಿ ವಿಷಯದ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರೊಂದಿಗೆ ಚರ್ಚಿಸಲಾಗಿದ್ದು, ಜೀಬ್ರಾ ಕ್ರಾಸ್ ಪೇಯಿಂಟ್ ಮಾಡಿಸಲು ಹಾಗೂ ಕೊಳವೆ ಬಾವಿಗಳ ಪೈಪ್‌ಲೈನ್ ಸಂಪರ್ಕವನ್ನು ಕಲ್ಪಿಸಲು ಹಾಗೂ ಸಿ.ಸಿ.ಟಿ.ವಿಗಳ ದುರಸ್ಥಿ ಕಾರ್ಯಗಳ ಬಗ್ಗೆ ಕ್ರಮ ಕೈಗೊಳ್ಳಲು ಗುತ್ತಿಗೆದಾರರಿಗೆ ಸೂಚಿಸಲಾಗಿದ್ದು, ಶೀಘ್ರವೇ ಅದನ್ನು ಮಾಡುವುದಾಗಿ ಸಭೆಯಲ್ಲಿ ಸಹಾಯಕ ಅಭಿಯಂತರರು ತಿಳಿಸಿರುತ್ತಾರೆ.

**(ಕ್ರಮ:- ಸಹಾಯಕ ಕಾರ್ಯಪಾಲಕ ಅಭಿಯಂತರರು ಹೆಚ್.ಬಿ.ಆರ್ ಲೇಔಟ್ ಉಪ- ವಿಭಾಗ ಬಿ.ಬಿ.ಎಂ.ಪಿ)**

6) **ಬೆಸ್ಕಾಂ ವಿಭಾಗ:-** ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯ ವಿನೋಭನಗರದ ಕಾರ್ಪೋರೇಟರ್ ಕಛೇರಿಯ ಪಕ್ಕದಲ್ಲಿ ಅಳವಡಿಸಲಾಗಿರುವ ಟ್ರಾನ್ಸ್‌ಫಾರ್ಮರ್ ಅನ್ನು ಬೇರೆ ಕಡೆಗೆ ಸ್ಥಳಾಂತರಿಸಲು ಶ್ರೀ.ಜಮೀಲ್ ರವರು ಸಭೆಯಲ್ಲಿ ತಿಳಿಸಿರುತ್ತಾರೆ ಹಾಗೂ ಪಿಳ್ಳಣ್ಣಗಾರ್ಡನ್ ೨ನೇ ಮುಖ್ಯರಸ್ತೆಯಲ್ಲಿ ಬೆಸ್ಕಾಂ ರವರು ರಸ್ತೆಯನ್ನು ಅಗೆದು ಅದನ್ನು ಮುಚ್ಚದೆ ಹಾಗೆಯೇ ಬಿಟ್ಟಿರುವುದರಿಂದ ಅನಾಹುತಗಳು ಸಂಭವಿಸುತ್ತಿರುವುದರಿಂದ ಸಾರ್ವಜನಿಕರಿಗೆ ಬಹಳ ತೊಂದರೆಯಾಗುತ್ತಿದೆ ಎಂದು ಶ್ರೀ.ಚಂದ್ರಶೇಖರ್ ರವರು ತಿಳಿಸಿರುತ್ತಾರೆ.

ಸದರಿ ವಿಷಯದ ಬಗ್ಗೆ ಸ್ಥಳ ಪರಿಶೀಲಿಸಿ ಆದ್ಯತೆಯ ಮೇರೆಗೆ ಕ್ರಮ ಕೈಗೊಳ್ಳಲು ಬೆಸ್ಕಾಂ ವಿಭಾಗದವರಿಗೆ ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

**(ಕ್ರಮ:- ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ವಿಭಾಗ ಬಿ.ಬಿ.ಎಂ.ಪಿ)**

7) **ಅರಣ್ಯ ಇಲಾಖೆ:-** ವಾರ್ಡ್ ವ್ಯಾಪ್ತಿಯ ಪಿಳ್ಳಣ್ಣಗಾರ್ಡನ್ 5ನೇ ಮುಖ್ಯರಸ್ತೆ, ದೇವರಾಜ್ ಅರಸ್ ರಸ್ತೆ, ಟೆಲಿಗ್ರಾಫ್ ಸ್ಟ್ರೀಟ್‌ನಲ್ಲಿ 2 ಮರಗಳು ಬೀಳುವ ಸ್ಥಿತಿಯಲ್ಲಿದ್ದು, ಮರಗಳನ್ನು ತೆರವುಗೊಳಿಸಲು ಹಾಗೂ ಪಿಳ್ಳಣ್ಣಗಾರ್ಡನ್ ಪ್ರದೇಶದ ಹಲವು ರಸ್ತೆಗಳಲ್ಲಿ ಮರಗಳ ಕೊಂಬೆಗಳನ್ನು ಕತ್ತರಿಸಲು ಶ್ರೀ.ಎಷಾನ್ ರವರು ಸಭೆಯಲ್ಲಿ ತಿಳಿಸಿರುತ್ತಾರೆ.

ಸಾಕಷ್ಟು ಬಾರಿ ಸೂಚಿಸಿದರೂ ಸಹ ಅರಣ್ಯ ಇಲಾಖೆಯ ಸಿಬ್ಬಂದಿಗಳು ಯಾವುದೇ ಸಮಸ್ಯೆಗೆ ಸಹಕರಿಸದೆ ಹಾಗೂ ದೂರವಾಣಿ ಕರೆಗಳಿಗೆ ಸ್ಪಂದಿಸದೆ ಬೇಜವಾಬ್ದಾರಿತನವನ್ನು ತೋರುತ್ತಿದ್ದಾರೆಂದು ಎಲ್ಲರೂ ದೂರಿರುತ್ತಾರೆ.

ಸದರಿ ವಿಷಯದ ಬಗ್ಗೆ ಹಿಂದಿನ ಸಭೆಗಳ ನಡಾವಳಿಗಳಂತೆ ಯಾವುದೇ ಕ್ರಮ ಜರುಗಿಸಿರುವ ಬಗ್ಗೆ ಮಾಹಿತಿಯನ್ನು ಸಲ್ಲಿಸಿರುವುದಿಲ್ಲ ಹಾಗೂ ಈವರೆವಿಗೂ ಯಾವುದೇ ಸಭೆಗೆ ಹಾಜರಾಗದಿರುವ ವಿಷಯವನ್ನು ಮಾನ್ಯ ಜಂಟಿ ಆಯುಕ್ತರು (ಪೂರ್ವ) ವಲಯ ರವರ ಅವಗಾಹನೆಗೆ ತರಲು ನೋಡಲ್ ಅಧಿಕಾರಿ ರವರು ಸದಸ್ಯ ಕಾರ್ಯದರ್ಶಿಗಳಿಗೆ ಸಭೆಯಲ್ಲಿ ಸೂಚಿಸಿರುತ್ತಾರೆ.

**(ಕ್ರಮ:- ವಲಯ ಅರಣ್ಯಾಧಿಕಾರಿಗಳು ಪೂರ್ವ ಬಿ.ಬಿ.ಎಂ.ಪಿ)**

8) **ಕಾನೂನು ಸುವ್ಯವಸ್ಥೆ (ಪೊಲೀಸ್ ಇಲಾಖೆ)-** ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯ ಪಿಳ್ಳಣ್ಣಗಾರ್ಡನ್‌ನಲ್ಲಿ ಮನೆಯ ಅಂಗಳದಲ್ಲಿನ ಮೋಟರ್‌ಗಳು ಹಾಗೂ ಪಿ.ವಿ.ಸಿ ಪೈಪ್‌ಗಳು ಕಳ್ಳತನವಾಗುತ್ತಿವೆ ಎಂದು ಶ್ರೀ.ಸತ್ಯನಾರಾಯಣ ರವರು ತಿಳಿಸಿರುತ್ತಾರೆ. ಹಾಗೂ ಹಿಂದೂ ರುದ್ರಭೂಮಿಯ ಸುತ್ತಮುತ್ತ ಕೆಲವು ಕಿಡಿಗೇಡಿಗಳು ಕಾನೂನು ಬಾಹಿರ ಚಟುವಟಿಕೆಯನ್ನು ನಡೆಸುತ್ತಿದ್ದಾರೆಂದು ಹಾಗೂ ಹಿಂದೂ ರುದ್ರಭೂಮಿಯ ಸುತ್ತಮುತ್ತಲು ದುಸ್ಥಿತಿಯಲ್ಲಿರುವ ವಾಹನಗಳನ್ನು ಹಾಗೆಯೇ ರಸ್ತೆಯ ಬದಿಯಲ್ಲಿ ಬಿಟ್ಟಿರುವುದರಿಂದ ಸದರಿ ಸ್ಥಳದಲ್ಲಿ ಮಾದಕ ವಸ್ತುಗಳ ಸೇವನೆ ಹೆಚ್ಚಾಗಿದೆಯೆಂದು ಶ್ರೀ.ಸತ್ಯನಾರಾಯಣ ರವರು ತಿಳಿಸಿರುತ್ತಾರೆ.

ಸದರಿ ವಿಷಯದ ಬಗ್ಗೆ ಕೂಡಲೆ ಸೂಕ್ತ ಕ್ರಮ ಕೈಗೊಳ್ಳುವಂತೆ ಪೋಲೀಸ್ ಠಾಣೆ ರವರಿಗೆ ವಾರ್ಡ್‌ನ ನೋಡಲ್ ಅಧಿಕಾರಿರವರು ಸೂಚಿಸಿರುತ್ತಾರೆ.

**(ಕ್ರಮ: ಆರಕ್ಷಕ ವೃತ್ತ ನಿರೀಕ್ಷಕರು ಕೆ.ಜಿ.ಹಳ್ಳಿ ಪೊಲೀಸ್ ಠಾಣೆ)**

**9) ಕಾನೂನು ಸುವ್ಯವಸ್ಥೆ (ಸಂಚಾರಿ ಪೋಲೀಸ್ ಇಲಾಖೆ)**- ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯ ಹಿಂದೂ ರುದ್ರಭೂಮಿಯ ಸುತ್ತಮುತ್ತಲು ದುಸ್ಥಿತಿಯಲ್ಲಿರುವ ವಾಹನಗಳನ್ನು ಹಾಗೆಯೇ ರಸ್ತೆಯ ಬದಿಯಲ್ಲಿ ಬಿಟ್ಟುಹೋಗಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ಶ್ರೀ.ಇರ್ಫಾನ್ ರವರು ಸಭೆಯಲ್ಲಿ ತಿಳಿಸಿರುತ್ತಾರೆ.

ಸದರಿ ವಿಷಯದ ಬಗ್ಗೆ ಕೂಡಲೆ ಕ್ರಮ ಕೈಗೊಳ್ಳುವಂತೆ ಸಂಚಾರಿ ಪೋಲೀಸ್ ಠಾಣೆ ರವರಿಗೆ ವಾರ್ಡ್‌ನ ನೋಡಲ್ ಅಧಿಕಾರಿರವರು ಸೂಚಿಸಿರುತ್ತಾರೆ.

**(ಕ್ರಮ: ಆರಕ್ಷಕ ವೃತ್ತ ನಿರೀಕ್ಷಕರು ಕೆ.ಜಿ.ಹಳ್ಳಿ ಪೋಲೀಸ್ ಠಾಣೆ)**

ಮುಂದುವರೆದು ದಿನಾಂಕ: 02.07.2022 ರಂದು ವಾರ್ಡ್ ಸಮಿತಿ ಸಭೆಗೆ ಗೈರು ಹಾಜರಾಗಿರುವ ಪೋಲೀಸ್ ಇಲಾಖೆ, ಬೆಸ್ಕಾಂ ಇಲಾಖೆ, ತೋಟಗಾರಿಕೆ ಇಲಾಖೆ ಅರಣ್ಯ ಇಲಾಖೆ ಅಧಿಕಾರಿಗಳು ಮುಂದಿನ ಸಭೆಯಲ್ಲಿ ತಪ್ಪದೇ ಹಾಜರಾಗಲು ಸೂಚಿಸಿರುತ್ತಾರೆ. ತಪ್ಪಿದ್ದಲ್ಲಿ ಮೇಲಾಧಿಕಾರಿಗಳಿಗೆ ವರದಿ ನೀಡಲು ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

ಸಭೆಯಲ್ಲಿ ಹಾಜರಿದ್ದ ಎಲ್ಲರನ್ನು ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಂದನೆಗಳೊಂದಿಗೆ,

ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿಗಳು
ವಾರ್ಡ್ ಸಂಖ್ಯೆ.30.ಕೆ.ಜಿ.ಹಳ್ಳಿ

06/07/22
ಜಂಟಿ ನಿರ್ದೇಶಕರು (ನಗರ ಯೋಜನೆ- ಸ್ಕ್ವಾಡ್)
ಹಾಗೂ ನೋಡಲ್ ಅಧಿಕಾರಿ & ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ.30.ಕೆ.ಜಿ.ಹಳ್ಳಿ

**ಪ್ರತಿಯನ್ನು:**

1. ಮಾನ್ಯ ಶಾಸಕರು, ಸರ್ವಜ್ಞನಗರ ವಿಧಾನ ಸಭಾಕ್ಷೇತ್ರ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಕೌನ್ಸಿಲ್ ಕಾರ್ಯದರ್ಶಿಗಳು ಬಿ.ಬಿ.ಎಂ.ಪಿ ಕೇಂದ್ರ ಕಚೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು ಸರ್ವಜ್ಞನಗರ ವಿಭಾಗ ರವರ ಅವಗಾಹನೆಗೆ ಕಳುಹಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಉಪ-ವಿಭಾಗ ಪಿಳ್ಳಣ್ಣಗಾರ್ಡನ್ ಕೆ.ಜಿ.ಹಳ್ಳಿ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು ವಿದ್ಯುತ್ ವಿಭಾಗ ಬಿ.ಬಿ.ಎಂ.ಪಿ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ ಫ್ರೇಜರ್‌ಟೌನ್ ಉಪ-ವಿಭಾಗ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಸರ್ವಜ್ಞನಗರ ವಿಭಾಗರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು ಹೆಚ್.ಬಿ.ಆರ್ ಲೇಔಟ್ ಉಪ- ವಿಭಾಗ ಬಿ.ಬಿ.ಎಂ.ಪಿ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
11. ಆರೋಗ್ಯ ವೈದ್ಯಾಧಿಕಾರಿಗಳು ಸರ್ವಜ್ಞನಗರ ವಿಭಾಗರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
12. ಆರಕ್ಷಕ ವೃತ್ತ ನಿರೀಕ್ಷಕರು (ಕಾನೂನು ಮತ್ತು ಸುವ್ಯವಸ್ಥೆ) ಕೆ.ಜಿ.ಹಳ್ಳಿ ಪೋಲೀಸ್‌ಠಾಣೆರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
13. ಆರಕ್ಷಕ ವೃತ್ತ ನಿರೀಕ್ಷಕರು ಸಂಚಾರಿ ಪೋಲೀಸ್ ಠಾಣೆ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
14. ಉಪ-ಅರಣ್ಯಾಧಿಕಾರಿಗಳು ಬಿ.ಬಿ.ಎಂ.ಪಿ ಪೂರ್ವ ವಲಯರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
15. ಕಛೇರಿ ಕಡತಕ್ಕೆ.